ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	470
ಸದಸ್ಯರ ಹೆಸರು	ಶ್ರೀ ಮುನಿರಾಜು ಗೌಡ ಪಿ.ಎಂ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	15.09.2021
ಉತ್ತರಿಸುವ ಸಚಿವರು	ಕಂದಾಯ ಸಚಿವರು

ಕ್ರ. ಸಂ.	**ಪ್ರಶ್ನೆ ವಿವರ**	**ಉತ್ತರ**
ಅ)	ರಾಜ್ಯದಲ್ಲಿ ಭೂಮಾಪಕರ ಕೊರತೆಯಿಂದಾಗಿ ಹೆಚ್ಚು ಪೋಡಿ ಪ್ರಕರಣಗಳು ಬಾಕಿ ಉಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು.
ಆ)	ಇದರಿಂದಾಗಿ ರೈತರಿಗೆ ಸಮಸ್ಯೆ ಉಂಟಾಗಿರುವುದು ಸರ್ಕಾರದ ಗಮನಕ್ಕಿದೆಯೇ;	
ಇ)	ಹಾಗಿದ್ದಲ್ಲಿ, ಈ ಸಮಸ್ಯೆಯ ನಿವಾರಣೆಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ವಿವರ ನೀಡುವುದು)	**ಸಮಸ್ಯೆಯ ಪರಿಹಾರಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳು:** 1) ಇಲಾಖೆಯಲ್ಲಿ 4020 ಭೂಮಾಪಕರ ಹುದ್ದೆಗಳು ಮಂಜೂರಾಗಿದ್ದು, 604 ಹುದ್ದೆಗಳು ಖಾಲಿ ಇರುತ್ತವೆ. ಈ ಹುದ್ದೆಗಳನ್ನು ಆರ್ಥಿಕ ಇಲಾಖೆಯ ಪೂರ್ವಾನುಮತಿ ಪಡೆದು ಭರ್ತಿ ಮಾಡಲು ಕ್ರಮ ಜರುಗಿಸಲಾಗುತ್ತಿದೆ. 2) ರಾಜ್ಯದಲ್ಲಿ ಒಟ್ಟು 1980 ಪರವಾನಗಿ ಭೂಮಾಪಕರುಗಳು ಕಾರ್ಯನಿರ್ವಹಿಸುತ್ತಿದ್ದು, ಹೊಸದಾಗಿ 820 ಪರವಾನಗಿ ಭೂಮಾಪಕರುಗಳನ್ನು ಆಯ್ಕೆ ಮಾಡಿಕೊಂಡು ತಾಲ್ಲೂಕುಗಳಿಗೆ ಹಂಚಿಕೆ ಮಾಡಿ ಪೋಡಿ ಪ್ರಕರಣಗಳ ಶೀಘ್ರ ವಿಲೇವಾರಿಗೆ ಕ್ರಮ ಜರುಗಿಸಲಾಗುತ್ತಿದೆ. 3) ಹೆಚ್ಚಿನ ಪ್ರಕರಣಗಳು ಬಾಕಿ ಇರುವ ತಾಲ್ಲೂಕುಗಳಿಗೆ ಕಡಿಮೆ ಪ್ರಕರಣಗಳು ಬಾಕಿ ಇರುವ ತಾಲ್ಲೂಕಿನಿಂದ ಭೂಮಾಪಕರನ್ನು ನಿಯೋಜನೆ ಮಾಡಿ ಬಾಕಿ ಪ್ರಕರಣಗಳನ್ನು ವಿಲೇಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. 4) ಅಲ್ಲದೇ, ಖಾಲಿ ಇರುವ ಹುದ್ದೆಗಳಿಗೆ ಅಧಿಕ ಪ್ರಭಾರದಲ್ಲಿಡುವ ಮೂಲಕ ಸಾರ್ವಜನಿಕರಿಗೆ ತೊಂದರೆಯಾಗದಂತೆ ಕ್ರಮಕೈಗೊಳ್ಳಲಾಗುತ್ತಿದೆ.

ಸಂಖ್ಯೆ: ಕಂಇ 127 ಎಸ್‌ಎಸ್‌ಸಿ 2021

(ಆರ್.ಅಶೋಕ)
ಕಂದಾಯ ಸಚಿವರು